**ಮಾನ್ಯ ವಿಶೇಷ ಜಿಲ್ಲಾಧಿಕಾರಿಗಳು, ಭೂಸ್ವಾಧೀನ ಪುನರವಸತಿ ಮತ್ತು ಪುನರನಿರ್ಮಾಣ, ಬೃಹತ ನೀರಾವರಿ ಯೋಜನೆಗಳು, ಬೆಳಗಾವಿ.**
**ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ಸೂಕ್ತ ಪರಿಹಾರದ ಹಕ್ಕು ಪುನರವಸತಿ ಮತ್ತು ಪುನರನಿರ್ಮಾಣ ಕಾಯ್ದೆ 2013 ರ**
**(ದಿ:01-01-2014 ರಿಂದ ಜಾರಿಗೆ ತಂದ ಅಧಿಸೂಚನೆ ಪ್ರಕಾರ) ರೊಂದಿಗೆ ಓದಲಾದ ಕಲಂ 11(1) ರಲ್ಲಿ ಮಡಿದ ಅಧಿಸೂಚನೆ.**

ಸಂ. ಭೂಸ್ವಾ/೭/3೬೮-35/05-06/28/17-18 ದಿನಾಂಕ: 02/02/2018

ಈ ಕೆಳಗಿನ ಅನೂಸೂಚಿಯಲ್ಲಿ ಕಾಣಿಸಿದ ಜಮೀನುಗಳು ಒಂದು ಸಾರ್ವಜನಿಕ ಉದ್ದೇಶಕ್ಕಾಗಿ ಬೆಳಗಾವಿ ಜಿಲ್ಲೆ ಹುಕ್ಕೇರಿ ತಾಲ್ಲೂಕಿನ ಬೆಳವಿ ಗ್ರಾಮದಲ್ಲಿ ಬರುವ ಕೊಟಬಾಗಿ ಯಾತ ನೀರಾವರಿ ಯೋಜನೆಯ ಹಂತ-2ರ ಎಡದಂಡೆ ಕಾಲುವೆಯ ಕಿ.ಮೀ.6 ರಿಂದ ೯ರವರೆಗಿನ ಕಾಲುವೆ ನಿರ್ಮಾಣಕ್ಕಾಗಿ ಜಮೀನುಗಳು ಬೇಕಾಗುವುದೆಂದು ವಿಶೇಷ ಜಿಲ್ಲಾಧಿಕಾರಿಗಳು, ಭೂಸ್ವಾಧೀನ, ಪುನರ ವಸತಿ ಮತ್ತು ಪುನರ ನಿರ್ಮಾಣ ಬೃಹತ ನೀರಾವರಿ ಯೋಜನೆಗಳು, ಬೆಳಗಾವಿ ಇವರಿಗೆ ಕಂಡು ಬಂದಿದೆ.

ಈ ಮೂಲಕ ತಿಳಿಸುವದೇನೆಂದರೆ, ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ಸೂಕ್ತ ಪರಿಹಾರದ ಹಕ್ಕು ಪುನರವಸತಿ ಮತ್ತು ಪುನರ್‌ನಿರ್ಮಾಣ ಕಾಯ್ದೆ 2013 ರ (ದಿನಾಂಕ: 01-01-2014 ರಿಂದ ಜಾರಿಗೆ ತಂದ ಅಧಿಸೂಚನೆ ಪ್ರಕಾರ) ಸದರಿ ಕಾಯ್ದೆಯ ಕಲಂ.11 ರ ಸೌಲಭ್ಯದ ಮೇರೆಗೆ (2013 ಕೇಂದ್ರದ 30 ನೇ ಕಾಯ್ದೆ) ಸದರ ಕಾನೂನಿನ ಕಲಂ 12 ರ ಮೇರೆಗೆ ಪ್ರದತ್ತವಾದ ಅಧಿಕಾರ ಚಲಾಯಿಸುವಂತೆ ವಿಶೇಷ ಜಿಲ್ಲಾಧಿಕಾರಿಗಳು, ಭೂಸ್ವಾಧೀನ, ಪುನರ್‌ವಸತಿ ಮತ್ತು ಪುನರ್‌ನಿರ್ಮಾಣ, ಬೃಹತ್ ನೀರಾವರಿ ಯೋಜನೆಗಳು, ಬೆಳಗಾವಿ ಇವರಿಗೆ ನೀಡಲಾಗಿದೆ. [ಸೂಕ್ತ ಪರಿಹಾರದ ಹಕ್ಕು ಮತ್ತು ಭೂಸ್ವಾಧೀನ, ಪುನರ್‌ವಸತಿ ಮತ್ತು ಪುನರ್‌ನಿರ್ಮಾಣದಲ್ಲಿ ಪಾರದರ್ಶಕತೆ (ಕರ್ನಾಟಕ) ನಿಯಮಾವಳಿಗಳು (ದಿನಾಂಕ:21-01-2014 ರಂದು ಜಾರಿಗೆ ಬಂದ ಅಧಿಸೂಚನೆ ಪ್ರಕಾರ) ಅಧ್ಯಾಯ 1 ರ ಅನುಕ್ರಮ ನಂ.2(ಬಿ) ನೋಡಿ] ಹಾಗೂ ಕಲಂ.43ರ ಮೇರೆಗೆ ಪುನರ್‌ವಸತಿ, ಪುನರ್‌ನಿರ್ಮಾಣದ ಅಧಿಕೃತ ಕಾರ್ಯಪಾಲನೆ ಪ್ರಾಧಿಕಾರವನ್ನು ವಿಶೇಷ ಭೂಸ್ವಾಧೀನಾಧಿಕಾರಿಗಳು ಹಿಡಕಲ್ ಡ್ಯಾಂ. ಇವರಿಗೆ ನೀಡಲಾಗಿದೆ.

ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ಸೂಕ್ತ ಪರಿಹಾರದ ಹಕ್ಕು ಪುನರ್‌ವಸತಿ ಮತ್ತು ಪುನರ್‌ನಿರ್ಮಾಣ ಕಾಯ್ದೆ-2013ರ ಕಲಂ 6 (2) ರ ಅಡಿಯಲ್ಲಿ ನೀರಾವರಿ ಯೋಜನೆಗಳಿಗಾಗಿ ಭೂಸ್ವಾಧೀನ ಪಡಿಸುವಾಗ ಪರಿಸರದ ಮೇಲಿನ ಪರಿಣಾಮ ನಿರ್ಧರಣದ ಅಂಶ (Environmental Impact Assessment) ಪ್ರಕ್ರಿಯೆಯನ್ನು ಬೇರಾವುದೇ ಕಾಯ್ದೆಗಳಡಿಯಲ್ಲಿ ಮಾಡಬೇಕಾದಲ್ಲಿ ಸಾಮಾಜಿಕ ನಿರ್ಧರಣದ ಅಂಶ (Social Impact Assessment) ಅನ್ವಯಿಸುತ್ತದೆ. ಎಂದು ಸ್ಪಷ್ಟೀಕರಿಸಿದೆ. ಪರಿಸರ ಇಲಾಖೆಯ ನೀರಾಕ್ಷೇಪಣಾ ಪತ್ರವನ್ನು ಪಡೆಯುವ ಬಗ್ಗೆ ಷರತ್ತು ಇರದೇ ಇರುವುದರಿಂದ ಪರಿಸರ ಇಲಾಖೆಯ ಅನುಮತಿಯನ್ನು ಕಾರ್ಯನಿರ್ವಾಹಕ ಅಭಿಯಂತರರು, ಕ.ನೀ.ನಿ.ನಿ. ಘ.ಬ.ಕಾ.ನಿ. ವಿಭಾಗ ನಂ.-4, ಚಿಕ್ಕೋಡಿ. ಇವರು ಅದರಂತೆ ಮುಖ್ಯಸ್ಥರು ಹಾಗೂ ಕಾರ್ಯದರ್ಶಿಗಳು ಯೋಜನಾ ಆಯೋಗ ದೆಹಲಿ. ಇವರ ಪತ್ರ ಸಂಖ್ಯೆ:11/11(56)/76/ಐ ಮತ್ತು ಕಾಡಾ ದಿನಾಂಕ:14-06-1976 ನೇದ್ದರಡಿ ಘಟಪ್ರಭಾ ನೀರಾವರಿ ಯೋಜನೆಯ 1961 ರ ಪೂರ್ವದಲ್ಲಿಯೇ ಪ್ರಾರಂಭವಾಗಿರುವುದರಿಂದ ಸದರ ಯೋಜನೆಗೆ ಪರಿಸರ ಇಲಾಖೆಯ ನೀರಾಕ್ಷೇಪಣಾ ಪತ್ರವನ್ನು ಪಡೆಯುವ ಬಗ್ಗೆ ಷರತ್ತು ಇರದೇ ಇರುವುದರಿಂದ ಪರಿಸರ ಇಲಾಖೆಯ ಅನುಮತಿಯನ್ನು ಪಡೆಯುವ ಪ್ರಶ್ನೆ ಉದ್ಭವಿಸುವುದಿಲ್ಲವೆಂದು ಅದರಂತೆ ಮುಖ್ಯಸ್ಥರು ಹಾಗೂ ಕಾರ್ಯದರ್ಶಿಗಳು ಯೋಜನಾ ಆಯೋಗ ದೆಹಲಿ. ಇವರ ಪತ್ರ ಸಂಖ್ಯೆ:11/11(56)/76/ಐ ಮತ್ತು ಕಾಡಾ ದಿನಾಂಕ:14-06-1976, ನೇದ್ದರಡಿ ಪಡೆಯಲಾಗಿದೆ ಅಂತಾ ತಿಳಿಸಿರುತ್ತಾರೆ.

2013 ರ ಕಾಯ್ದೆ ಕಲಂ 15(1) ರ ಮೇರೆಗೆ ಆಸಕ್ತಿವುಳ್ಳವರು ತಮ್ಮ ತಂಟೆ-ತಕರಾರುಗಳನ್ನು ಈ ಅಧಿಸೂಚನೆ ಪ್ರಕಟಗೊಂಡ 60 ದಿನಗಳೊಳಗಾಗಿ ವಿಶೇಷ ಭೂಸ್ವಾಧೀನಾಧಿಕಾರಿಗಳು, ಹಿಡಕಲ್ ಡ್ಯಾಂ. ಇವರ ಕಾರ್ಯಾಲಯಕ್ಕೆ ಅರ್ಜಿ ಸಲ್ಲಿಸಬೇಕು. ನಂತರ ಬಂದ ಅರ್ಜಿಗಳನ್ನು ಯಾವುದೇ ಮುನ್ಸೂಚನೆ ನೀಡದೇ ವಿಲೇಗೆ ಹಾಕಲಾಗುವುದು.

ಈ ಜಮೀನು ಸ್ವಾಧೀನ ಕೆಲಸ ನಿರ್ವಹಿಸುವಲ್ಲಿ ಸರಕಾರದಿಂದ ನೇಮಿಸಲ್ಪಟ್ಟ ಮೋಜಣಿದಾರರಿಗಾಗಲಿ ಅಥವಾ ಈ ಕೆಲಸ ಮಾಡುವವರಿಗೆ ಯಾರೂ ಅಡ್ಡಿ ಮಾಡಕೊಡದೆಂದು ಎಚ್ಚರಿಸಲಾಗಿದೆ. ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ಸೂಕ್ತ ಪರಿಹಾರದ ಹಕ್ಕು, ಪುನರವಸತಿ ಮತ್ತು ಪುನರನಿರ್ಮಾಣ ಕಾಯ್ದೆ 2013 ರ ಕಾಯ್ದೆ ಕಲಂ 11(4) ರ ಮೇರೆಗೆ ಈ ಅಧಿಸೂಚನೆ ಪ್ರಕಟಗೊಂಡ ದಿನಾಂಕದಿಂದ ಸದರಿ ಸ್ವಾಧೀನಪಡಿಸಿಕೊಳ್ಳಲಿರುವ ಭೂಮಿಯನ್ನು ಒಪ್ಪಂದದ ಮೇರೆಗೆ ವಿಕ್ರಯಿಸುವ, ಭೋಗ್ಯಕ್ಕೆ ಅಡವಿಡುವ, ಅನುಭವಿಸುವ, ಬದಲಾಯಿಸುವ ಅಥವಾ ಇನ್ನಾವುದೇ ರಿತಿಯ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ನಿರ್ಬಂಧಿಸಿದೆ. ಅಂತಹ ಯಾವುದೇ ಕ್ರಯ ಅಥವಾ ಇನ್ನಾವುದೇ ರೀತಿಯ ಅಭಿವೃದ್ಧಿ ಕಾರ್ಯಗಳನ್ನು ಐತೀರ್ಪು ರಚಿಸುವಾಗ ಗಣನೆಗೆ ತೆಗೆದುಕೊಳ್ಳದೇ ಅಂತಿಮವಾಗಿ ಸದರಿ ಕಾಯ್ದೆ ಅನ್ವಯ ಭೂಸ್ವಾಧೀನ ಪಡಿಸಿಕೊಳ್ಳಲಾಗುವುದೆಂದು ಈ ಮೂಲಕ ತಿಳಿಯಪಡಿಸಲಾಗಿದೆ. ಸದರಿ ಪ್ರಕರಣದಲ್ಲಿ ಭೂಸ್ವಾಧೀನಕ್ಕೆ ಒಳಪಡುವ ಜಮೀನಿನ ನಕ್ಷೆಯನ್ನು ವಿಶೇಷ ಭೂಸ್ವಾಧೀನಾಧಿಕಾರಿಗಳು, ಹಿಡಕಲ್ ಡ್ಯಾಂ. ಇವರ ಕಾರ್ಯಾಲಯದಲ್ಲಿ ಪರಿಶೀಲನೆಗಾಗಿ ಇಡಲಾಗಿದೆ.